**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯದಲ್ಲಿ, ತರೀಕೆರೆ.**

**ಸಿ.ಸಿ.991/2023**

**ಪಿರ್ಯಾದುದಾರರು** ಃ ತರೀಕೆರೆ ಪೊಲೀಸ್

**-ವಿರುದ್ಧ-**

**ಆರೋಪಿ/ತರು** ಃ ಕೃಷ್ಣಮೂರ್ತಿ

**-ಃದೋಷಾರೋಪಣೆಃ-**

**ಶ್ರೀ ವೈದ್ಯ ಶ್ರೀಕಾಂತ್,** ಬಿ.ಎಸ್ಸಿ., ಎಲ್.ಎಲ್.ಬಿ., ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ತರೀಕೆರೆ ಆದ ನಾನು ಈ ಕೆಳಗೆ ಕಾಣಿಸಿರುವಃ

> ಕೃಷ್ಣಮೂರ್ತಿ ಬಿನ್ ಲೇಟ್ ಶಿವಲಿಂಗಪ್ಪ, 39 ವರ್ಷ, ಕೂಲಿ ಕೆಲಸ, ವಾಸಃಅಂಬೇಡ್ಕರ್ ನಗರ, ನಾಗೇನಹಳ್ಳಿ.

ಆದ ನಿಮ್ಮ ವಿರುದ್ಧ ಈ ಕೆಳಗಿನಂತೆ ಹೊರಿಸಿರುವ ದೋಷಾರೋಪಣೆ ಎಂದರೆಃ

ದಿನಾಂಕಃ14.12.2022 ರಂದು 13-30ರ ಸಮಯದಲ್ಲಿ ತರೀಕೆರೆ ಪೊಲೀಸ್ ಠಾಣಾ ಸರಹದ್ದಿನ ನಾಗೇನಹಳ್ಳಿ ಗ್ರಾಮದ ಅಂಬೇಡ್ಕರ್ ನಗರದ ರಸ್ತೆ ಬದಿ ಆರೋಪಿಯಾದ ನೀವು ಕಾನೂನು ಬಾಹಿರವಾಗಿ ಯಾವುದೇ ಪರವಾನಗಿ ಇಲ್ಲದೇ ಒಂದು ಪ್ಲಾಸ್ಟಿಕ್ ಚೀಲದಲ್ಲಿ ರೂ.1,194/- ಬೆಲೆ ಬಾಳುವ ಓರಿಜಿನಲ್ ಚಾಯ್ಸ್ ಡಿಲಕ್ಸ್ ವಿಸ್ಕಿ ಎಂದು ಬರೆದಿರುವ 90 ಎಂ ಎಲ್ ನ 34 ಟೆಟ್ರಾ ಪ್ಯಾಕ್ ಗಳನ್ನು ಹೊಂದಿ, ಆ ಮೂಲಕ ನೀವು **ಕರ್ನಾಟಕ ಅಬಕಾರಿ ಕಾಯ್ದೆ ಕಲಂ.32** ರ ರೀತ್ಯಾ ಅಪರಾಧಗಳನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಅದೇ ದಿನ, ಅದೇ ಸಮಯ, ಸ್ಥಳ ಹಾಗೂ ವಿಚಾರದಲ್ಲಿ ಆರೋಪಿಯಾದ ನೀವು ಒಂದು ಪ್ಲಾಸ್ಟಿಕ್ ಚೀಲದಲ್ಲಿ ರೂ.1,194/- ಬೆಲೆ ಬಾಳುವ ಓರಿಜಿನಲ್ ಚಾಯ್ಸ್ ಡಿಲಕ್ಸ್ ವಿಸ್ಕಿ ಎಂದು ಬರೆದಿರುವ 90 ಎಂ ಎಲ್ ನ 34 ಟೆಟ್ರಾ ಪ್ಯಾಕ್‌ಗಳನ್ನು ಅಕ್ರಮವಾಗಿ ಇಟ್ಟುಕೊಂಡು ಲಾಭಕ್ಕಾಗಿ ಮಾರಾಟ ಮಾಡುತ್ತಿದ್ದು, ಆ ಮೂಲಕ ನೀವು **ಕರ್ನಾಟಕ**

**ಅಬಕಾರಿ ಕಾಯ್ದೆ ಕಲಂ.34** ರ ರೀತ್ಯಾ ಅಪರಾಧಗಳನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೇಲೆ ಹೇಳಿದ ದಿನಾಂಕ, ಸಮಯ, ಸ್ಥಳ ಹಾಗೂ ಸಂದರ್ಭಗಳಂದು ಆರೋಪಿಯಾದ ನೀವು ಒಂದು ಪ್ಲಾಸ್ಟಿಕ್ ಚೀಲದಲ್ಲಿ ರೂ.1,194/- ಬೆಲೆ ಬಾಳುವ ಒರಿಜಿನಲ್ ಚಾಯ್ಸ್ ಡಿಲಕ್ಸ್ ವಿಸ್ಕಿ ಎಂದು ಬರೆದಿರುವ 90 ಎಂ ಎಲ್ ನ 34 ಟೆಟ್ರಾ ಪ್ಯಾಕ್‌ಗಳು ಅದು ಮಾನವನ ಆರೋಗ್ಯಕ್ಕೆ ಹಾನಿಕರವೆಂದು ಗೊತ್ತಿದ್ದರೂ ಕೂಡಾ ವಶದಲ್ಲಿಟ್ಟುಕೊಂಡು ಲಾಭಕ್ಕಾಗಿ ಸಾರ್ವಜನಿಕರಿಗೆ ಮಾರಾಟ ಮಾಡುತ್ತಿದ್ದು, ಆ ಮೂಲಕ ನೀವು **ಭಾ.ದಂ.ಸಂ. ಕಲಂ.273** ರ ರೀತ್ಯಾ ಅಪರಾಧಗಳನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಈ ಆರೋಪಗಳ ಮೇಲೆ ನೀವು ಈ ನ್ಯಾಯಾಲಯದ ಆರೋಪ ವಿಚಾರಣೆಗೆ ಗುರಿಯಾಗತಕ್ಕದ್ದೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ.

ದಿನಾಂಕಃ

Sd/-
**(ವೈದ್ಯ ಶ್ರೀಕಾಂತ್)**
ಹಿ. ಪ್ರಧಾನ ಪ್ರದನ್ಯಾದಂ, ತರೀಕೆರೆ.

ಪ್ರಃ 1)ನಿಮಗೆ ತಿಳಿಯುವಂತಹ ಭಾಷೆಯಲ್ಲಿ ಓದಿ ಹೇಳಲಾದ ಆರೋಪಣೆಯನ್ನು ನೀವು ಕೇಳಿ ತಿಳಿದುಕೊಂಡಿರುವಿರಾ?
ಉಃ

ಪ್ರಃ 2)ಸದರಿ ಆರೋಪಣೆಗಳನ್ನು ನೀವು ಒಪ್ಪಿಕೊಳ್ಳುತ್ತೀರಾ ಅಥವಾ ನಿರಾಕರಿಸುತ್ತೀರಾ?
ಉಃ

(ಆರೋಪವನ್ನು ಆರೋಪಿತರಿಗೆ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ನಾನೇ ಸ್ವತಃ ಬರೆದುಕೊಂಡಿರುವುದು ನಿಜ ಮತ್ತು ಸತ್ಯವಾಗಿದೆ ಎಂದು ಈ ಮೂಲಕ ದೃಢೀಕರಿಸುತ್ತೇನೆ)
ದಿನಾಂಕಃ

Sd/-
ಹಿ. ಪ್ರಧಾನ ಪ್ರ.ದ.ನ್ಯಾ.ದಂ ತರೀಕೆರೆ.

ಆರೋಪಿ/ತರ ಸಹಿಃ